ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

17

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಸಭೆ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ  ದಿನಾಂಕ : DATE : 3/2/2021

ವಿಧಾನಸಭೆಯಲ್ಲಿ ಪ್ರತಿಧ್ವನಿ | ದೂರು ನೀಡಿದರೂ ಕ್ರಮ ಕೈಗೊಳ್ಳದ ಆರೋಪ

# ದಾಸರಹಳ್ಳಿ ಕ್ಷೇತ್ರದಲ್ಲಿ ಒತ್ತುವರಿ ತೆರವಿಗೆ ಪಟ್ಟು

■ **ವಿಕ ಸುದ್ದಿಲೋಕ** ಬೆಂಗಳೂರು 3/2/21

ದಾಸರಹಳ್ಳಿ ವಿಧಾನಸಭೆ ಕ್ಷೇತ್ರದಲ್ಲಿ ಸರಕಾರಿ ಭೂಮಿ ವ್ಯಾಪಕವಾಗಿ ಒತ್ತುವರಿಯಾಗಿದೆ. ಹಾಗೆಯೇ ರಾಜಕಾಲುವೆ ಒತ್ತುವರಿಯಾಗಿರುವುದರಿಂದ ಮಳೆ ನೀರು ಸಾವಿರಾರು ಮನೆಗಳಿಗೆ ನುಗ್ಗಿ ನಿವಾಸಿಗಳಿಗೆ ತೊಂದರೆಯಾಗುತ್ತಿದ್ದು, ಕೂಡಲೇ ಒತ್ತುವರಿ ತೆರವು ಮಾಡಲು ಕ್ರಮ ತೆಗೆದುಕೊಳ್ಳಬೇಕೆಂದು ಶಾಸಕ ಆರ್.ಮಂಜುನಾಥ್ ವಿಧಾನಸಭೆಯಲ್ಲಿ ಒತ್ತಾಯಿಸಿದರು.



ವಿಧಾನಸಭೆ ಅಧಿವೇಶನದಲ್ಲಿ ಈ ವಿಷಯ ಪ್ರಸ್ತಾಪಿಸಿದ ಶಾಸಕರು, ಸರ್ವೆ ನಂಬರ್ 51/30 ರಲ್ಲಿ 16 ಎಕರೆ 20 ಗುಂಟೆ ಸರಕಾರಿ ಜಾಗ ಇತ್ತು. ಇದರಲ್ಲಿ 13 ಎಕರೆಯನ್ನು ಸರಕಾರದ ಇತರೆ ಉದ್ದೇಶಗಳಿಗೆ ಬಳಸಿಕೊಳ್ಳಲಾಗಿದೆ. ಇನ್ನುಳಿದ 3.20 ಎಕರೆ ಜಮೀನು ಒತ್ತುವರಿಯಾಗಿದೆ. ಈ ಸಂಬಂಧ ಕಂದಾಯ ಇಲಾಖೆಯ ಉಪ ವಿಭಾಗಾಧಿಕಾರಿ, ತಹಸೀಲ್ದಾರ್, ಸರ್ವೆ ಅಧಿಕಾರಿಗಳಿಗೂ ದೂರು ನೀಡಿ ಸರಕಾರಿ ಜಮೀನು ರಕ್ಷಣೆ ಮಾಡುವಂತೆ ಕೋರಿದ್ದೇನೆ. ಆದರೆ ಇದುವರೆಗೂ ಸರ್ವೆ ಕೆಲಸ ನಡೆದಿಲ್ಲ ಎಂದು ದೂರಿದರು.

ರಾಜಕಾಲುವೆ ಹಾದುಹೋಗಿರುವ ಇಕ್ಕೆಲಗಳಲ್ಲಿ ಒತ್ತುವರಿಯಾಗಿದೆ. ಪ್ರತಿ ವರ್ಷ ಮಳೆಗಾಲದಲ್ಲಿ ಜನರು ಈ ಸಮಸ್ಯೆ ಎದುರಿಸುತ್ತಿದ್ದಾರೆ. ಹೀಗಾಗಿ ಕಂದಾಯ ಇಲಾಖೆ ಅಧಿಕಾರಿಗಳು ರಾಜಕಾಲುವೆ ಒತ್ತುವರಿ ತೆರವು ಮಾಡಿ ಮಳೆ ನೀರು ಸುಗಮವಾಗಿ ಹರಿಯಲು ಅವಕಾಶ ಮಾಡಿಕೊಡಬೇಕೆಂದು ಸರಕಾರವನ್ನು ಒತ್ತಾಯಿಸಿದರು.